## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ,
ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 10 /2022-23 ದಿನಾಂಕ: 21.05.2022

### ದಿನಾಂಕ-21.05.2022 ರಂದು ನಡೆದಿರುವ ವಿಜಿನಾಪುರ ವಾರ್ಡ್ ಸಂಖ್ಯೆ-51 ರ ವಾರ್ಡ್ ಸಮಿತಿ ಸಭೆ ನಡುವಳಿಗಳು

| | ಸದಸ್ಯರ ಹೆಸರು ಮತ್ತು ಪದನಾಮ | ಸದಸ್ಯರ ಹಾಜರು/ಗೈರು ಹಾಜರು |
|---|---|---|
| 1. | ಶ್ರೀಮತಿ.ತ್ರಿವೇಣಿ (ಅಧ್ಯಕ್ಷರು) | ಹಾಜರು |
| 2 | ಶ್ರೀ.ಪಾರ್ಥಸಾರಥಿ (ಸದಸ್ಯರು) | ಹಾಜರು |
| 3 | ಶ್ರೀ.ನಾಗಭೂಷಣ, ಸಹಾಯಕ ಅಭಿಯಂತರರು (ವಾರ್ಡ್ ನಂ.51) (ಕಾರ್ಯದರ್ಶಿ) | ಹಾಜರು |
| 4 | ಶ್ರೀ.ರಾಜಣ್ಣ (ಹಿ.ಆ.ಪ) ವಾರ್ಡ್ ನಂ.51 | ಹಾಜರು |
| 5 | ಶ್ರೀ.ರಂಗಯ್ಯ ಬಿ.ಡಬ್ಲ್ಯೂ.ಎಸ್.ಎಸ್.ಬಿ | |
| 6 | ಶ್ರೀ.ಮಧು (ಕಿ.ಆ.ಪ) ವಾರ್ಡ್ ನಂ.51 | ಹಾಜರು |
| 7 | ಶ್ರೀ.ಮಂಜುನಾಥ ಬಡಿಗೇರ್ (ಕಂದಾಯ ಪರಿವೀಕ್ಷಕರು) | ಹಾಜರು |
| 8 | ಶ್ರೀ.ಸಂಜೀವಯ್ಯ (ಪಿ.ಎಸ್.ಐ)ಟ್ರಾಫಿಕ್) | ಹಾಜರು |
| 9 | ಡಿ.ವಿ ಮೋಹನ್ ಲೈವ್ ಸ್ಟಾಕ್ ಆಫೀಸರ್ | ಹಾಜರು |
| 10 | ಶ್ರೀ.ಬಷೀರ್ ಅಹಮದ್, ಬಿ.ಡಿ.ಎ ಲೇಔಟ್ | ಹಾಜರು |
| 11 | ಶ್ರೀ.ರಘುಶೆಟ್ಟಿ | ಹಾಜರು |
| 12 | ಶ್ರೀ.ಶಿವಕುಮಾರ್(ಈಸ್ಟ್ ಆಫ್ ಎನ್.ಜಿ.ಇ.ಎಫ್ ಕ್ಷೇಮಾಭಿವೃದ್ಧಿ ಸಂಘ) | ಹಾಜರು |
| 13 | ಶ್ರೀ.ನವೀನ್ ಕುಮಾರ್ | ಹಾಜರು |
| 14 | ಶ್ರೀ.ದರ್ಶನ್ | ಹಾಜರು |
| 15 | ಶ್ರೀ.ವೇಣುಗೋಪಾಲ್ ರಾವ್ | ಹಾಜರು |

ದಿನಾಂಕ-21.05.2022 ರಂದು ಪೂರ್ವಾಹ್ನ: 11.30 ಗಂಟೆ ಸಮಯದಲ್ಲಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯನದಾಗಿ ಶ್ರೀಮತಿ.ತ್ರಿವೇಣಿ ಅಧ್ಯಕ್ಷರು ರವರು ಸಭೆಯಲ್ಲಿ ಹಾಜರಿರುವ ಸದಸ್ಯರುಗಳು ಮತ್ತು ಅಧಿಕಾರಿ ವೃಂಧದವರಿಗೆಲ್ಲಾ ಸ್ವಾಗತಕೋರಿದರು. ತದನಂತರ ಈ ಕೆಳಕಂಡ ವಿಷಯಗಳ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ.ಬಷೀರ್ ಅಹಮದ್, ಬಿ.ಡಿ.ಎ ಲೇಔಟ್ ರವರು ಮಾತನಾಡಿ ವಿಜಿನಾಪುರ ವ್ಯಾಪ್ತಿಯಲ್ಲಿ ಡ್ರೈ ವೇಸ್ಟ್ ಸೆಂಟರ್‌ನಲ್ಲಿ ಬೆಂಕಿ ಬಿದ್ದಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುವ ಸಾಧ್ಯತೆ ಇರುವುದರಿಂದ ಸದರಿ ಡ್ರೈ ವೇಸ್ಟ್ ಸೆಂಟರ್‌ನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ಸಭೆಯಲ್ಲಿ ಕೋರಿದರು.
   ಕ್ರಮ:- ಆರೋಗ್ಯ ನಿರೀಕ್ಷಕರು, ವಿಜಿನಾಪುರ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.
2. ಶ್ರೀ.ರಘುಶೆಟ್ಟಿ ರವರು ಮಾತನಾಡುತ್ತಾ, ಟಾಟಾ ಸ್ಟೀಲ್ ರಸ್ತೆಯಲ್ಲಿ ರಸ್ತೆ ಮತ್ತು ಚರಂಡಿಯಲ್ಲಿರು ಹೂಳನ್ನು ತೆಗೆದು ಸ್ವಚ್ಛಗೊಳಿಸಲು ಸಭೆಯಲ್ಲಿ ಕೋರಿರುತ್ತಾರೆ.
   ಕ್ರಮ:- ಸಹಾಯಕ ಅಭಿಯಂತರರು, ಮೇಜರ್ ರಸ್ತೆ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

3. ಶ್ರೀ.ದರ್ಶನ್ ರವರು ಮಾತನಾಡಿ ಬಿಡಿಎ ಲೇಔಟ್ ಪಾರ್ಕ್ ರಸ್ತೆಯಲ್ಲಿ ಸರಕು ಸಾಗಾಣಿಕೆಯ ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಇದರಿಂದ ಪಾರ್ಕಿಗೆ ಬರುವ ಸಾರ್ವಜನಿಕರಿಗೆ ಮಕ್ಕಳಿಗೆ, ವಯಸ್ಕರಿಗೆ, ಸಂಚರಿಸಲು ಮತ್ತು ವಾಹನಗಳ ಸಂಚಾರಕ್ಕೂ ತೊಂದರೆಯಾಗುತ್ತಿರುತ್ತದೆ. ಇದರಿಂದ ಅಪಘಾತವಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಇದರ ಬಗ್ಗೆ ಅಗತ್ಯ ಕ್ರಮವಹಿಸಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ:- ಸಭೆಯಲ್ಲಿ ಹಾಜರಿದ್ದ ಸಂಚಾರ ಪೋಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರಿಗೆ ಇದರ ಬಗ್ಗೆ ಅಗತ್ಯ ಕ್ರಮವಹಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

4. ಶ್ರೀ.ಶಿವಕುಮಾರ್ ರವರು ಮಾತನಾಡಿ ಕೆಂಪೇಗೌಡ ಅಂಡರ್‌ಪಾಸ್‌ನಲ್ಲಿ ಮಳೆಬಂದು ಹೂಳು ತುಂಬಿದ್ದು, ಇದರಿಂದ ಸಾರ್ವಜನಿಕರ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಅಗತ್ಯ ಕ್ರಮವಹಿಸಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ:- ಸಹಾಯಕ ಅಭಿಯಂತರರು, ಮೇಜರ್ ರಸ್ತೆ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

5. ಶ್ರೀ.ವೇಣುಗೋಪಾಲ್ ರಾವ್ ರವರು ಮಾತನಾಡಿ ಬಿಡಿಎ ಲೇಔಟ್ ಮತ್ತು ವಿಜಿನಾಪುರ ವಾರ್ಡ್ ವ್ಯಾಪ್ತಿಯಲ್ಲಿ ಕಿಡಿಗೇಡಿಗಳು ಗಾಂಜಾ ಸೇವನೆ ಮಾಡುತ್ತಿರುವಾಗ ಸದರಿ ರಸ್ತೆಯಲ್ಲಿ ಸಾರ್ವಜನಿಕರು ಓಡಾಡುವ ಸಂಧರ್ಭದಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಹಲ್ಲೆ ಮಾಡುತ್ತಿರುತ್ತಾರೆ.. ಇದರ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ:- ಆರಕ್ಷಕ ನಿರೀಕ್ಷಕರು ರಾಮಮೂರ್ತಿನಗರ ಪೋಲೀಸ್ ಠಾಣೆ ರವರಿಗೆ ಇದರ ಬಗ್ಗೆ ಅಗತ್ಯ ಕ್ರಮವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಅಧ್ಯಕ್ಷರು ರವರು ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯ ಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

Kragal Mary

**ವಾರ್ಡ್ ಸಮಿತಿ ಕಾರ್ಯದರ್ಶಿಗಳು,**

**ವಾರ್ಡ್ ನಂ.51, ವಿಜಿನಾಪುರ**